## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ. ಇಂದಿರಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡ ಹಸಾಳ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/1075/2016/ARLO-1, ದಿನಾಂಕ: 24.01.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 22.12.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಕೋಲಾರ ಜಿಲ್ಲೆ ಮುಳಬಾಗಲು ತಾಲ್ಲೂಕು ಕೋಲಾದೇವಿ ಅಂಚೆ ಮಂಡಿಕಲ್ ಗ್ರಾಮದ ನಿವಾಸಿಯಾದ ಶ್ರೀ. ಮಂಡಿಕಲ್ ನಾಗರಾಜ ಬಿನ್ ಎಂ.ಬಿ. ನಾರಾಯಣ ಗೌಡ ತಮ್ಮ ದೂರಿನಲ್ಲಿ ಕೋಲಾರ ಜಿಲ್ಲೆ ಮತ್ತು ತಾಲ್ಲೂಕು ದೊಡ್ಡ ಹಸಾಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ. ಇಂದಿರಮ್ಮ ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. ದೂರಿನ ಸಂಕ್ಷಿಪ್ತ ವಿವರಣೆ:– ಕೋಲಾರ ಜಿಲ್ಲೆ ಮತ್ತು ತಾಲ್ಲೂಕು ದೊಡ್ಡಹಸಾಳ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸೇರಿದ ಗಾಜಲದಿನ್ನೆ ಗ್ರಾಮದ ಸರ್ವೆ ನಂ. 11/1 ರಲ್ಲಿ ಖಾತಾ ನಂ. 604/51 ರ ಭೂ ಪರಿವರ್ತನೆ ಉಲ್ಲಂಘಿಸಿ, ಸರ್ಕಾರಕ್ಕೆ ವಂಚನೆ ಮಾಡಿದ್ದು, ಶ್ರೀ.ಟಿ.ಸಿ.ನಾರಾಯಣಸ್ವಾಮಿ ಬಿನ್ ಚೊಕ್ಕಪ್ಪ ರವರಿಗೆ ಇ–ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ, ಖಾತಾ ಮಾಡಿದ್ದಾರೆ. ಎದುರುದಾರರು ಹಣದ ವ್ಯಾಮೋಹದಿಂದ ಒಂದು ಖಾತೆಗೆ ಸುಮಾರು ರೂ. 40,000/– ಮೇಲ್ಪಟ್ಟ ಹಣವನ್ನು ತನ್ನ ಪತಿ ದಲ್ಲಾಳಿ ಕೆಲಸ ಮಾಡಿದ್ದು, ಈ ರೀತಿ ಖಾತಾ ಬದಲಾವಣೆ ಮಾಡುವ ವಿಚಾರ ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರ ಗಮನಕ್ಕೆ ಬರದೇ, ಸರ್ಕಾರಕ್ಕೆ ವಂಚನೆ ಮಾಡಿರುವುದಾಗಿ ಹೇಳಿದ್ದಾರೆ.

3. ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ಎದುರುದಾರರು ಯಾವುದೇ ರೀತಿಯ ಅಕ್ರಮವನ್ನಾಗಲೀ ಸರ್ಕಾರಕ್ಕೆ ಮತ್ತು ಗ್ರಾಮ ಪಂಚಾಯತ್‌ಗೆ ವಂಚನೆ ಮಾಡಿಲ್ಲ. ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ದಿ:30.12.14 ರಂದು ಇ–ಸ್ವತ್ತು ತಂತ್ರಾಂಶದಲ್ಲಿ ಈ ಹಿಂದೆಯೇ ಅಳವಡಿಸಲಾಗಿದೆ. ಎದುರುದಾರರು ಸದರಿ ಗ್ರಾಮ ಪಂಚಾಯತ್‌ನ ಅಭಿವೃದ್ಧಿ ಅಧಿಕಾರಿಯಾಗಿ ವರ್ಗಾವಣೆಗೊಂಡ ನಂತರ ದಿ. 27.07.15 ರಂದು ಪ್ರಭಾರವನ್ನು ವಹಿಸಿಕೊಂಡಿದ್ದು, ದಿ: 08.06.15 ರಂದು ಮ್ಯುಟೇಷನ್ ಬದಲಾವಣೆಗೆ ಬಂದ ಅರ್ಜಿಯನ್ನು

ಸಾಮಾನ್ಯ ಸಭೆಯಲ್ಲಿ ಮಂಡಿಸಿ, ಅನುಮೋದನೆ ಪಡೆದ ನಂತರ ದಿ:30.10.15 ರಂದು ಮ್ಯುಟೇಷನ್ ಬದಲಾವಣೆ ಮಾಡಲಾಗಿದೆ. ಇದರಲ್ಲಿ ಯಾವುದೇ ಅಕ್ರಮವಿಲ್ಲವೆಂದು ಹೇಳಿದ್ದಾರೆ.

4. ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಎದುರುದಾರರ ಆಕ್ಷೇಪಣೆಯ ಅಂಶಗಳನ್ನು ಅಲ್ಲಗಳೆದು, ದೂರಿನಲ್ಲಿನ ಅಂಶಗಳನ್ನೇ ಪುನರುಚ್ಚರಿಸಿದ್ದಾರೆ.

5 ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಗಾಜಲದಿನ್ನೆ ಗ್ರಾಮದ ಸರ್ವೆ ನಂ. 11/1ರ ಜಮೀನು ಮುಲತಃ ಶ್ರೀ.ಕೆ.ಸಿ.ಶ್ರೀದರಮೂರ್ತಿ ಬಿನ್ ಟಿ.ಎಂ.ಚಿಕ್ಕಣ್ಣ ಎಂಬುವವರ ಹೆಸರಿನಲ್ಲಿದ್ದು, ಸದರಿ ಜಮೀನು ಭೂ ಪರಿವರ್ತನೆಯಾಗಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಎದುರುದಾರರು ಹಾಜರುಪಡಿಸಿಲ್ಲ. ಸದರಿ ಜಮೀನಿನ ಪೈಕಿ ಕೆಲವು ಸ್ವತ್ತನ್ನು ಶ್ರೀ.ಟಿ.ಸಿ.ನಾರಾಯಣಸ್ವಾಮಿ ಬಿನ್ ಚೊಕ್ಕಪ್ಪ ಎಂಬುವವರಿಗೆ ಖಾತಾ ನಂ. 604/51 ರಂತೆ ಮಾಡಿ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿರುವುದು ದಾಖಲೆಗಳಿಂದ ಕಂಡು ಬಂದಿದೆ. ಆ ನಂತರ, ದಿ: 08.06.15 ರಂದು ಎದುರುದಾರರು ಮ್ಯುಟೇಷನ್ ಬದಲಾವಣೆ ಮಾಡಿರುವುದು ಕಂಡು ಬಂದಿದೆ. ಆದರೆ, ಯಾವುದೇ ಜಮೀನು ಭೂ ಪರಿವರ್ತನೆಯಾಗದೇ ಇ-ಸ್ವತ್ತು ತಂತ್ರಾಶದಲ್ಲಿ ಅಳವಡಿಸಿ ಖಾತಾ ಬದಲಾವಣೆ ಮಾಡಲು ಬರುವುದಿಲ್ಲ. ಕಾರಣ, ಸದರಿ ಜಮೀನು ಭೂ ಪರಿವರ್ತನೆಯಾಗದೇ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ಖಾತಾ ಬದಲಾವಣೆ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲದಿದ್ದರೂ ಸಹ ಎದುರುದಾರರು ಸದರಿ ಜಮೀನಿನ ಬಗ್ಗೆ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ಖಾತಾ ಬದಲಾವಣೆ ಮಾಡಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

7. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀಮತಿ. ಇಂದಿರಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡ ಹಸಾಳ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ, ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/82/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-18-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ. ಇಂದಿರಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡ ಹಸಾಳ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ,
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ,
6. ಶ್ರೀಮತಿ. ಇಂದಿರಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೊಡ್ಡ ಹಸಾಳ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ,
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.